# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1224 (1300) |
| ಸದಸ್ಯರ ಹೆಸರು: | ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 19.03.2025 |
| ಉತ್ತರಿಸುವ ಸಚಿವರು: | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಂದಾಯ ಇಲಾಖೆಯಲ್ಲಿ ಮಂಜೂರಾದ ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ಹುದ್ದೆಗಳ ಸಂಖ್ಯೆ ಎಷ್ಟು: | ತಹಶೀಲ್ದಾರ್ ಗ್ರೇಡ್-1 ಮತ್ತು ಗ್ರೇಡ್-2 ಹುದ್ದೆಗಳ ವೃಂದ ಬಲವನ್ನು ಸಮಗ್ರ ಪರಿಷ್ಕರಣೆಗೆ ಒಳಪಡಿಸಲಾಗಿದ್ದು, ಕರಡು ವೃಂದಬಲವನ್ನು ಪ್ರಕಟಿಸಲಾಗಿದೆ. ವೃಂದ ಬಲವನ್ನು ಅಂತಿಮಗೊಳಿಸಲು ಕ್ರಮ ವಹಿಸಲಾಗುತ್ತಿದೆ. |
| (ಆ) | ಸದರಿ ಹುದ್ದೆಗಳಲ್ಲಿ ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು: | |
| (ಇ) | ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಯಾವಾಗ ಪ್ರಕಟಿಸಲಾಗವುದು: | ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:10669- 10676/2021 ಮತ್ತು ಅರ್ಜಿ ಸಂಖ್ಯೆ:10691-10698/2021 ದಿನಾಂಕ:23.12.2022ರ ಆದೇಶ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ರಿಟ್ ಅರ್ಜಿ ಸಂಖ್ಯೆ:103880/2023 ದಿನಾಂಕ:26.09.2023ರ ಆದೇಶ, ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯ ರಿವ್ಯೂ ಪಿಟಷನ್ ಅರ್ಜಿ ಸಂಖ್ಯೆ:2007-2035/2023 ದಿನಾಂಕ:04.12.2023ರ ಆದೇಶ ಹಾಗೂ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:103456-457/2024 ಹಾಗೂ 107924/2024 ದಿನಾಂಕ:25.07.2024ರ ಆದೇಶಗಳನ್ವಯ, ದಿನಾಂಕ:25.06.2021ರಂದು ಪ್ರಕಟಿಸಲಾಗಿದ್ದ ಸ್ಥಳೀಯ ವೃಂದದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:18.10.2024ರಂದು ಆಕ್ಷೇಪಣೆ/ಸಲಹೆಗಳನ್ನು ಸಲ್ಲಿಸಲು 30 ದಿನಗಳ ಕಾಲಾವಕಾಶ ನೀಡಿ ಪ್ರಕಟಿಸಲಾಗಿರುತ್ತದೆ.<br><br>ಮೇಲ್ಕಂಡ ದಿನಾಂಕ: 25.06.2021ರ ಕಲ್ಯಾಣ ಕರ್ನಾಟಕ - ತಹಶೀಲ್ದಾರ್ ಗ್ರೇಡ್-2 ವೃಂದದ ಜೇಷ್ಠತಾ ಪಟ್ಟಿಯನ್ನು ಮಾನ್ಯ ಕೆ.ಎ.ಟಿ ಮತ್ತು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶಗಳನ್ವಯ ಪರಿಷ್ಕರಿಸಿರುವುದರಿಂದ ಉಳಿಕೆ ಮೂಲ ವೃಂದದ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ಜೇಷ್ಠತಾ ಪಟ್ಟಿಯ ಮೇಲೆಯೂ ಸಹ ಪರಿಣಾಮ ಉಂಟಾಗುತ್ತದೆ. ಹೀಗಾಗಿ, ದಿನಾಂಕ:23.03.2021ರಂದು ಪ್ರಕಟಿಸಲಾಗಿದ್ದ ಉಳಿಕೆ ಮೂಲ ವೃಂದದ ಜೇಷ್ಠತಾ ಪಟ್ಟಿಯನ್ನು ಸಹ ಪರಿಷ್ಕರಿಸಲು ಸರ್ಕಾರವು ಪ್ರಜ್ಞಾಪೂರ್ವಕವಾಗಿ ಆಡಳಿತಾತ್ಮಕ ತೀರ್ಮಾನ |
| (ಈ) | ತಹಶೀಲ್ದಾರ್ ಗ್ರೇಡ್-2 ಹುದ್ದೆಯಲ್ಲಿ ಕೆ.ಸಿ.ಎಸ್.ಆರ್ ನಿಯಮ 32 ರಡಿ ಕಾರ್ಯನಿರ್ವಹಿಸುತ್ತಿರುವ ಶಿರಸ್ತೇದಾರ್/ಉಪ ತಹಶೀಲ್ದಾರ್‌ರನ್ನು ಯಾವಾಗ 42 ಬಿ ರಡಿ ಖಾಯಂ ಮಾಡಲಾಗುವುದು: | |
| (ಉ) | ತಹಶೀಲ್ದಾರ್ ಗ್ರೇಡ್-1 ಖಾಲಿ ಹುದ್ದೆ ಎಷ್ಟು: ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? | |

| | | |
|---|---|---|
| | | ಕೈಗೊಂಡು, ಮಾನ್ಯ ನ್ಯಾಯಾಲಯಕ್ಕೆ ಸದರಿ ಮಾಹಿತಿಯನ್ನು ನೀಡಿ ದಿನಾಂಕ:18.10.2024 ರಂದು ಉಳಿಕೆ ಮೂಲ ವೃಂದ-ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ.<br><br>ಮೇಲ್ಕಂಡ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳಿಗೆ ಸಂಬಂಧಿಸಿದಂತೆ ಹಲವಾರು ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿದ್ದು, ಶೀಘ್ರದಲ್ಲಿಯೇ ತಹಶೀಲ್ದಾರ್ ಗ್ರೇಡ್-2 ವೃಂದದ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ ಪ್ರಕಟಿಸಲಾಗುವುದು.<br><br>ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ ಹಾಗೂ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಹಲವು ಪ್ರಕರಣಗಳು ದಾಖಲಾಗಿ, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ:25.07.2024 ರಂದು ನೀಡಿರುವ ಆದೇಶದನ್ವಯ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ:18.10.2024 ರಂದು ಪ್ರಕಟಿಸಲಾಗಿದ್ದು, ಶೀಘ್ರದಲ್ಲಿಯೇ ಅಂತಿಮಗೊಳಿಸಿ, ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು. |

ಇ-ಆರ್‌ಡಿ 118 ಎಎಸ್‌ಡಿ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು